ಕರ್ನಾಟಕ ಸರ್ಕಾರ

ಸಂ.ಡಿಡಬ್ಲ್ಯೂಸಿ:ಐಸಿಡಿ:ಬಿಎಲ್‌ಡಿ–1/11/2018–19

ನಿರ್ದೇಶಕರ ಕಛೇರಿ,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಬೆಂಗಳೂರು, ದಿನಾಂಕ: 15.12.2018

1. ಎಲ್ಲ ಜಿಲ್ಲಾ ಉಪ ನಿರ್ದೇಶಕರು,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ.
2. ಎಲ್ಲಾ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು,
ಶಿಶು ಅಭಿವೃದ್ಧಿ ಯೋಜನಾ ಕಛೇರಿ.

ಜರೂರು

ಮಾನ್ಯರೆ,

ವಿಷಯ: ಅಂಗನವಾಡಿ ಕೇಂದ್ರಗಳಿಗೆ ಮೂಲಭೂತ ಸೌಕರ್ಯವನ್ನು ಒದಗಿಸಲು ಜಂಟಿ ಸುತ್ತೋಲೆ ಹೊರಡಿಸಿರುವ ಬಗ್ಗೆ.

ಉಲ್ಲೇಖ: ಸರ್ಕಾರಿ ಸುತ್ತೋಲೆ ಸಂ: ಮಮಇ 293 ಐಸಿಡಿ 2018, ದಿ: 16.11.2018.

-----

ರಾಜ್ಯದ ಎಲ್ಲಾ ಅಂಗನವಾಡಿ ಕೇಂದ್ರಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಉತ್ತಮ ಪಡಿಸಲು ದಿನಾಂಕ: 16.10.2018 ರಂದು ನಡೆದ ಸಭೆಯಲ್ಲಿ ಮುಖ್ಯ ಕಾರ್ಯದರ್ಶಿಗಳು ಸೂಚಿಸಿದ್ದು, ಈ ಹಿನ್ನಲೆಯಲ್ಲಿ ಗ್ರಾಮೀಣ ಪ್ರದೇಶದಲ್ಲಿನ ಎಲ್ಲಾ ಅಂಗನವಾಡಿ ಕೇಂದ್ರಗಳಿಗೆ ಸೂಕ್ತ ಸ್ಥಳಾವಕಾಶ ಒದಗಿಸಲು, ಶೌಚಾಲಯ ನಿರ್ಮಾಣ, ಅಂಗನವಾಡಿ ಕೇಂದ್ರಗಳ ದುರಸ್ಥಿ, ಸುಣ್ಣ ಬಣ್ಣ ಬಳಿಯುವುದು, ಕುಡಿಯುವ ನೀರಿನ ಸೌಲಭ್ಯ, ವಿದ್ಯುತ್ ಮತ್ತು ಫ್ಯಾನ್ ಸೌಲಭ್ಯ ಹಾಗೂ ಆಟಿಕೆ ಸಾಮಗ್ರಿಗಳನ್ನು ಒದಗಿಸಲು ಸಂಬಂಧಪಟ್ಟ ಗ್ರಾಮ ಪಂಚಾಯತಿಯೊಂದಿಗೆ ಸಮನ್ವಯತೆ ಸಾಧಿಸಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಹಯೋಗದೊಂದಿಗೆ ಕಾರ್ಯನಿರ್ವಹಿಸಲು ಉಲ್ಲೇಖಿತ ಜಂಟಿ ಸುತ್ತೋಲೆ ಹೊರಡಿಸಿದ್ದು, ಪ್ರತಿಯನ್ನು ಈ ಪತ್ರದೊಂದಿಗೆ ಲಗತ್ತಿಸಿದೆ.

ಮುಂದುವರೆದು, ಸದರಿ ಸುತ್ತೋಲೆಯನ್ನು ಸಂಬಂಧಪಟ್ಟ ಎಲ್ಲಾ ಮೇಲ್ವಿಚಾರಕಿಯರು ಹಾಗೂ ಅಂಗನವಾಡಿ ಕಾರ್ಯಕರ್ತೆಯರ ಗಮನಕ್ಕೆ ತರಲು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಗೆ ಸೂಚಿಸಲಾಗಿದೆ. ಅಲ್ಲದೇ ತಮ್ಮ ಯೋಜನಾ ವ್ಯಾಪ್ತಿಯಲ್ಲಿ ಗ್ರಾಮಾಂತರ ಪ್ರದೇಶದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳಿಗೆ ಅವಶ್ಯವಿರುವ ಮೂಲಭೂತ ಸೌಲಭ್ಯಗಳ ಪಟ್ಟಿ ಮಾಡಿ ಸಂಬಂಧಪಟ್ಟ ಗ್ರಾಮ ಪಂಚಾಯತಿಗಳಿಗೆ ಸೂಕ್ತ ಪ್ರಸ್ತಾವನೆ ಸಲ್ಲಿಸಲು ಕ್ರಮವಹಿಸಲು ಸೂಚಿಸಿದೆ. ಪಟ್ಟಿಗಳನ್ನು ಗ್ರಾಮ ಪಂಚಾಯತಿಗಳಿಗೆ ಸಲ್ಲಿಸಿರುವ ಬಗ್ಗೆ ಪ್ರಧಾನ ಕಛೇರಿಗೆ ವರದಿ ಸಲ್ಲಿಸಲು ಕೋರಿದೆ.

ಜಂಟಿ ನಿರ್ದೇಶಕರು (ಐಸಿಡಿಎಸ್),
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಬೆಂಗಳೂರು.

<u>ಪ್ರತಿಯನ್ನು:</u>

1. ನಿರ್ದೇಶಕರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆರವರಿಗೆ ಮಾಹಿತಿಗಾಗಿ.
2. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳಿಗೆ ಮತ್ತು ಎಲ್ಲಾ ಗ್ರಾಮ ಪಂಚಾಯತ್‌ಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಮಾಹಿತಿಗಾಗಿ ಸಂಬಂಧಪಟ್ಟ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಮುಖಾಂತರ.
3. ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ– ಇಲಾಖಾ ವೆಬ್ ಸೈಟ್ ನಲ್ಲಿ ಪ್ರಕಟಿಸಲು.

ಕರ್ನಾಟಕ ಸರ್ಕಾರ

ಸಂಖ್ಯೆ: ಮಮಇ 293 ಐಸಿಡಿ 2018

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ 16.11.2018

## ಸುತ್ತೋಲೆ

ವಿಷಯ: ಅಂಗನವಾಡಿ ಕೇಂದ್ರಗಳಿಗೆ ಮೂಲಭೂತ ಸೌಕರ್ಯವನ್ನು ಒದಗಿಸುವ ಕುರಿತು.

ಉಲ್ಲೇಖ: 16.10.2018ರಂದು ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆ.

***

ರಾಜ್ಯದಲ್ಲಿ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯನ್ನು 1975 ರಿಂದ ಜಾರಿಗೊಳಿಸಲಾಗುತ್ತಿದೆ. ಪ್ರಸ್ತುತ 65911 ಅಂಗನವಾಡಿ ಕೇಂದ್ರಗಳ ಮೂಲಕ ಈ ಯೋಜನೆಯನ್ನು 204 ಶಿಶುಅಭಿವೃದ್ಧಿ ಯೋಜನೆಗಳಡಿ ಅನುಷ್ಠಾನಗೊಳಿಸಲಾಗುತ್ತಿದೆ. ಈ ಅಂಗನವಾಡಿ ಕೇಂದ್ರಗಳಲ್ಲಿ ಪೂರಕ ಪೌಷ್ಠಿಕ ಆಹಾರ, ಚುಚ್ಚುಮದ್ದು, ಆರೋಗ್ಯ ತಪಾಸಣೆ, ಮಾಹಿತಿ ಸೇವೆ, ಶಾಲಾಪೂರ್ವ ಶಿಕ್ಷಣ, ಪೌಷ್ಠಿಕತೆ ಮತ್ತು ಆರೋಗ್ಯ ಶಿಕ್ಷಣ ಸೇವೆಗಳನ್ನು 6 ತಿಂಗಳಿನಿಂದ 6 ವರ್ಷದ ಮಕ್ಕಳಿಗೆ, ಗರ್ಭಿಣಿಯರು, ಬಾಣಂತಿಯರಿಗೆ ಒದಗಿಸಲಾಗುತ್ತಿದೆ.

ಅಂಗನವಾಡಿ ಕೇಂದ್ರಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಉತ್ತಮ ಪಡಿಸಲು ದಿನಾಂಕ:16.10.2018 ರಂದು ನಡೆದ ಸಭೆಯಲ್ಲಿ ಮುಖ್ಯಕಾರ್ಯದರ್ಶಿಗಳು ಸೂಚಿಸಿರುತ್ತಾರೆ. ಈ ಹಿನ್ನಲೆಯಲ್ಲಿ ಗ್ರಾಮೀಣ ಪ್ರದೇಶದಲ್ಲಿನ ಅಂಗನವಾಡಿ ಕೇಂದ್ರಗಳಿಗೆ ಈ ಕೆಳಗಿನ ಸೌಲಭ್ಯಗಳನ್ನು ಒದಗಿಸಲು ಕ್ರಮಕೈಗೊಳ್ಳುವುದು.

1. ಅಂಗನವಾಡಿ ಕೇಂದ್ರ ನಿರ್ಮಿಸಲು ಸೂಕ್ತ ಸ್ಥಳಾವಕಾಶ ಕಲ್ಪಿಸುವುದು
2. ಶೌಚಾಲಯ ನಿರ್ಮಾಣ
3. ಅಂಗನವಾಡಿ ಕೇಂದ್ರಗಳ ದುರಸ್ಥಿ
4. ಅಂಗನವಾಡಿಗಳಿಗೆ ಸುಣ್ಣ/ಬಣ್ಣ ಬಳಿಯುವುದು.
5. ಕುಡಿಯುವ ನೀರಿನ ಸೌಲಭ್ಯ
6. ವಿದ್ಯುತ್ ಮತ್ತು ಫ್ಯಾನ್ ಸೌಲಭ್ಯ
7. ಆಟಿಕೆ ಸಾಮಾಗ್ರಿಗಳು

ಸಂಬಂಧಪಟ್ಟ ಗ್ರಾಮ ಪಂಚಾಯತ್‌ಗಳು ತಮ್ಮ ವ್ಯಾಪ್ತಿಯಲ್ಲಿ ಬರುವ ಅಂಗನವಾಡಿ ಕೇಂದ್ರಗಳಿಗೆ ಮೇಲೆ ತಿಳಿಸಿದ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಕ್ರಮಕೈಗೊಳ್ಳುವುದು. ಯೋಜನೆಯ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಸಂಬಂಧ ಪಟ್ಟ ಇಲಾಖೆಗಳ ಸಮನ್ವಯದೊಂದಿಗೆ ಅಂಗನವಾಡಿ ಕೇಂದ್ರಗಳಲ್ಲಿ ಎಲ್ಲಾ ಮೂಲ ಸೌಲಭ್ಯಗಳನ್ನು ಒದಗಿಸಿರುವ ಬಗ್ಗೆ ಖಚಿತಪಡಿಸಿಕೊಳ್ಳುವುದು.

(ಉಮಾ ಮಹದೇವನ್)
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ

(ಎಲ್. ಕೆ. ಅತೀಕ್)
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್
ರಾಜ್ ಇಲಾಖೆ

ಪ್ರತಿಯನ್ನು :

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಹಣಾಧಿಕಾರಿಗಳು
3. ಎಲ್ಲಾ ಉಪ ನಿರ್ದೇಶಕರು ಹಾಗೂ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಸಮಗ್ರ ಶಿಶು ಅಭಿವೃದ್ಧಿ ಯೋಜನೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರಿಗೆ ಸೂಕ್ತ ಕ್ರಮಕ್ಕಾಗಿ.
4. ರಾಜ್ಯದ ಎಲ್ಲಾ ಗ್ರಾಮ ಪಂಚಾಯತ್‌ಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.
5. ಗಣಕ ಕೋಶ, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.